**ಕರ್ನಾಟಕ ಸರ್ಕಾರ**

ಸಂಖ್ಯೆ: ಆಇ 04 ಬಿಎಸ್‌ಜಿ 2022

ಕರ್ನಾಟಕ ಸರ್ಕಾರದ ಸಚಿವಾಲಯ,
ಕೊಠಡಿ ಸಂಖ್ಯೆ 257, ವಿಧಾನಸೌಧ,
ಬೆಂಗಳೂರು, ದಿನಾಂಕ:18.01.2023.

**ಇಂದ:**

ಸರ್ಕಾರದ ಅಪರ ಮುಖ್ಯ ಕಾರ್ಯದರ್ಶಿಗಳು,
ಆರ್ಥಿಕ ಇಲಾಖೆ,
ವಿಧಾನ ಸೌಧ, ಬೆಂಗಳೂರು.

**ಇವರಿಗೆ:**

ಸರ್ಕಾರದ ಎಲ್ಲಾ ಅಪರ ಮುಖ್ಯ ಕಾರ್ಯದರ್ಶಿ/
ಪ್ರಧಾನ ಕಾರ್ಯದರ್ಶಿ/ಕಾರ್ಯದರ್ಶಿಗಳಿಗೆ

**ಮಾನ್ಯರೆ,**

**ವಿಷಯ:** 2022-23ನೇ ಸಾಲಿನ ಪೂರಕ ಅಂದಾಜುಗಳು (ಎರಡನೇ ಕಂತು) ವೆಚ್ಚ ಮಾಡಲು ಅನುಮತಿ ಪತ್ರ ನೀಡುವ ಕುರಿತು.

******

2022-23ನೇ ಸಾಲಿನ ಪೂರಕ ಅಂದಾಜುಗಳು (ಎರಡನೇ ಕಂತು) ವಿಧಾನ ಮಂಡಲದ ಎರಡೂ ಸದನಗಳ ಮುಂದೆ 2022ರ ಡಿಸೆಂಬರ್ ತಿಂಗಳಲ್ಲಿ ಮಂಡಿಸಿದ್ದು, ಇದಕ್ಕೆ ಸಂಬಂಧಿಸಿದ ಧನವಿನಿಯೋಗ ವಿಧೇಯಕ 2022ಕ್ಕೆ ಜನವರಿ ತಿಂಗಳ 18ನೇ ದಿನಾಂಕದಂದು ಸನ್ಮಾನ್ಯ ರಾಜ್ಯಪಾಲರಿಂದ ಒಪ್ಪಿಗೆ ದೊರೆತಿರುವುದಾಗಿ, ದಿನಾಂಕ:18.12.2022ರ ಅಧಿಸೂಚನೆ ಸಂಖ್ಯೆ: ಸಂವ್ಯಶಾಇ 34 ಶಾಸನ 2022 ರಲ್ಲಿ ತಿಳಿಸಲಾಗಿದೆ. ಪೂರಕ ಅಂದಾಜುಗಳ (ಎರಡನೇ ಕಂತು) ಪ್ರತಿಯನ್ನು ಇದರೊಂದಿಗೆ ಲಗತ್ತಿಸಿ ಕಳುಹಿಸಲಾಗಿದೆ.

2. ಈ ಮೊತ್ತವನ್ನು ಉಪಯೋಗಿಸಿಕೊಳ್ಳುವಾಗ ಮಿತವ್ಯಯ ಆದೇಶ ಮತ್ತು ಇತರೆ ಆರ್ಥಿಕ ನಿಯಮಗಳನ್ನು ಕಟ್ಟುನಿಟ್ಟಾಗಿ ಪಾಲಿಸಲು ಸೂಚಿಸಿದೆ. **2022-23 ನೇ ಸಾಲಿನಲ್ಲಿ ತ್ರೈಮಾಸಿಕ ಕಂತುಗಳ ಹಣ ಬಿಡುಗಡೆ ಕುರಿತು ಆರ್ಥಿಕ ಅಧಿಕಾರ ಪ್ರತ್ಯಾಯೋಜನೆ ನೀಡಿ ಹೊರಡಿಸಿರುವ ಆದೇಶದ ಅನುಬಂಧ-1, 1A ಮತ್ತು 1B ರಲ್ಲಿ ಪ್ರತ್ಯಾಯೋಜನೆ ಮಾಡಿರದ ಯೋಜನೆಗಳಿಗೆ ಪೂರಕ ಅಂದಾಜಿನಲ್ಲಿ ಅನುದಾನ ಒದಗಿಸಿದ್ದಲ್ಲಿ ಅಂತಹ ಯೋಜನೆಗಳಿಗೆ ಹಣ ಬಿಡುಗಡೆ ಮಾಡುವ ಮೊದಲು ಆರ್ಥಿಕ ಇಲಾಖೆಯ ಸಹಮತಿ ಪಡೆಯುವುದು ಅಗತ್ಯವಾಗಿದ್ದು, ಖಜಾನೆಯು ಬಿಲ್ಲುಗಳನ್ನು ಅಂಗೀಕರಿಸುವ ಸಂದರ್ಭದಲ್ಲಿ ಆರ್ಥಿಕ ಇಲಾಖೆಯ ಸಹಮತಿ ಪಡೆದಿರುವ ಬಗ್ಗೆ ಖಚಿತಪಡಿಸಿಕೊಳ್ಳುವುದು.** ಪೂರಕ ಅಂದಾಜುಗಳು-2 ರಲ್ಲಿ ಹೊಸ ಯೋಜನೆಗಳಿಗೆ ಹಣವನ್ನು ಒದಗಿಸಿದ್ದಲ್ಲಿ ಅದನ್ನು ಸಹಾ ಆರ್ಥಿಕ ಇಲಾಖೆಯ ಸಹಮತಿಯನ್ನು ಪಡೆದ ನಂತರವೇ ಬಿಡುಗಡೆ ಮಾಡತಕ್ಕದ್ದು.

3. ಪೂರಕ ಅಂದಾಜುಗಳು-2 ರಲ್ಲಿ ಅವಕಾಶ ಮಾಡಿರುವ ಈ ಕೆಳಕಂಡವುಗಳಿಗೆ ಸಂಬಂಧಿಸಿದಂತೆ ನಗದು ಹಣ ಬಿಡುಗಡೆ ಮಾಡುವಂತಿಲ್ಲ:-

ಅ) ಈಗಾಗಲೇ ಹೆಚ್ಚುವರಿ ಅನುದಾನ ಬಿಡುಗಡೆ ಮಾಡಿ ಅದನ್ನು ಸಕ್ರಮಗೊಳಿಸಲು ಒದಗಿಸಿರುವ ಅನುದಾನಗಳು

ಆ) ಲೆಕ್ಕ ಹೊಂದಾಣಿಕೆ ಸಲುವಾಗಿ ಮಾಡಿರುವ ಆಯವ್ಯಯ ಅವಕಾಶಗಳು

ಇ) ಸಾದಿಲ್ವಾರು ನಿಧಿಗೆ ಮರುತುಂಬಲು ಒದಗಿಸಿರುವ ಅನುದಾನಗಳು

4. ಪೂರಕ ಅಂದಾಜುಗಳು-2 ರಲ್ಲಿ ಸಾಂಕೇತಿಕ ಅನುದಾನವನ್ನು ಒದಗಿಸಿದ್ದಲ್ಲಿ, ಆ ಬಾಬ್ತಿಗೆ ಪುನರ್ವಿನಿಯೋಗದ ಮೂಲಕ ವೆಚ್ಚಕ್ಕೆ ಬೇಕಾದ ಮೊತ್ತವನ್ನು ಒದಗಿಸಿಕೊಂಡು ಹಣ ಬಿಡುಗಡೆ ಮಾಡುವುದು.

5. ಯಾವುದೇ ಕಾರಣಕ್ಕಾಗಿ ಪೂರಕ ಅಂದಾಜುಗಳಲ್ಲಿ ಒದಗಿಸಿರುವ ಮೊತ್ತವನ್ನು ಭಾಗಶಃ ಅಥವಾ ಪೂರ್ಣವಾಗಿ ಉಪಯೋಗಿಸಲು ಆಗದಿದ್ದಲ್ಲಿ, ದಿನಾಂಕ:**31.03.2023** ರ ಒಳಗಾಗಿ ತಪ್ಪದೇ ಸರ್ಕಾರಕ್ಕೆ ಅಧ್ಯರ್ಪಣೆ ಮಾಡುವುದು.

ತಮ್ಮ ವಿಶ್ವಾಸಿ,

18/1/2023

(ಹೆಚ್.ಎ. ಶೋಭ)

ಸರ್ಕಾರದ ಜಂಟಿ ಕಾರ್ಯದರ್ಶಿ,

ಆರ್ಥಿಕ ಇಲಾಖೆ(ಎಫ್.ಆರ್&ಬಿ.ಸಿ.ಸಿ).

ಪ್ರತಿಗಳು:

1) ಪ್ರಧಾನ ಮಹಾಲೇಖಪಾಲರು, ಲೆಕ್ಕಪತ್ರಗಳು ಮತ್ತು ಹಕ್ಕುಗಳು, (ಪುಸ್ತಕ-2) / ಲೆಕ್ಕ ತನಿಖೆ-1/ ಲೆಕ್ಕ ತನಿಖೆ-2 ಕರ್ನಾಟಕ, ರೆಸಿಡೆನ್ಸಿ ಪಾರ್ಕ್ ರಸ್ತೆ, ಬೆಂಗಳೂರು-560 001.
2) ಸರ್ಕಾರದ ಅಪರ ಮುಖ್ಯ ಕಾರ್ಯದರ್ಶಿ, ಆರ್ಥಿಕ ಇಲಾಖೆ ಇವರ ಆಪ್ತ ಕಾರ್ಯದರ್ಶಿ
3) ಸರ್ಕಾರದ ಕಾರ್ಯದರ್ಶಿ (ಆಯವ್ಯಯ ಮತ್ತು ಸಂಪನ್ಮೂಲಗಳು), ಆರ್ಥಿಕ ಇಲಾಖೆ.
4) ಸರ್ಕಾರದ ಕಾರ್ಯದರ್ಶಿ (ವೆಚ್ಚ), ಆರ್ಥಿಕ ಇಲಾಖೆ.
5) ಎಲ್ಲಾ ಆಂತರಿಕ ಆರ್ಥಿಕ ಸಲಹೆಗಾರರು ಹಾಗೂ ಪದನಿಮಿತ್ತ ಸರ್ಕಾರದ ಉಪ ಕಾರ್ಯದರ್ಶಿಗಳಿಗೆ.
6) ಸರ್ಕಾರದ ಉಪ ಕಾರ್ಯದರ್ಶಿ (ಆ ಮತ್ತು ಸಂ)/ಕಲ್ಯಾಣ/ ಆರ್ಥಿಕ ಇಲಾಖೆ.
7) ಸರ್ಕಾರದ ಅಪರ ಕಾರ್ಯದರ್ಶಿಗಳು (ಆಡಳಿತ), ಆರ್ಥಿಕ ಇಲಾಖೆ.
8) ಆಯುಕ್ತರು, ಖಜಾನೆ ಇಲಾಖೆ, ಆರನೇ ಮಹಡಿ, ಕೆ.ಪಿ.ಸಿ.ಎಲ್, ಗ್ರೀನ್ ಬಿಲ್ಡಿಂಗ್, ಅರಮನೆ ರಸ್ತೆ, ಬೆಂಗಳೂರು-560 001.
9) ವಿಶೇಷಾಧಿಕಾರಿ ಮತ್ತು ಪದನಿಮಿತ್ತ ಸರ್ಕಾರದ ಜಂಟಿ ಕಾರ್ಯದರ್ಶಿ, ಜಿಲ್ಲಾಪಂಚಾಯತ್, ಆರ್ಥಿಕ ಇಲಾಖೆ.
10) ವಿಶೇಷಾಧಿಕಾರಿ ಮತ್ತು ಪದನಿಮಿತ್ತ ಸರ್ಕಾರದ ಉಪ ಕಾರ್ಯದರ್ಶಿ, ಲೋಕೋಪಯೋಗಿ ಇಲಾಖೆ (ಆರ್ಥಿಕ ಕೋಶ).
11) ಉಪ ನಿರ್ದೇಶಕರು, ಖಜಾನೆ ಗಣಕ ಜಾಲ ನಿರ್ವಹಣಾ ಕೇಂದ್ರ, ಎರಡನೇ ಮಹಡಿ, ಖನಿಜ ಭವನ, ಸಂಖ್ಯೆ.49, ಶ್ರೀ ಡಿ. ದೇವರಾಜ ಅರಸು ರಸ್ತೆ, ಬೆಂಗಳೂರು-560 001.
12) ಆರ್ಥಿಕ ಇಲಾಖೆಯ ಎಲ್ಲಾ ವೆಚ್ಚ ಶಾಖೆಗಳ ಶಾಖಾಧಿಕಾರಿಗಳು.
13) ಶಾಖಾ ರಕ್ಷಾ ಕಡತ/ಹೆಚ್ಚುವರಿ ಪ್ರತಿಗಳು.